ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಮಂಗಳವಾರ, ದಿನಾಂಕ : 10 ನೇ ಮಾರ್ಚ್, 2020

ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಬಿ.ಪಿ.ಎಲ್ ಕಾರ್ಡ್‌ಗಳ ಬೇಡಿಗೆ ಬಗ್ಗೆ

ಶ್ರೀ ಬಿ. ಜಿ. ಪಾಟೀಲ್(ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

558 (768) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಬಿ.ಪಿ.ಎಲ್ ಕಾರ್ಡ್ ಕೋರಿ ಬಂದ ಅರ್ಜಿಗಳು ಎಷ್ಟು; (ವಿವರ ನೀಡುವುದು)

(ಆ) ಇದುವರೆವಿಗೂ ವಿತರಿಸಿದ ಬಿ.ಪಿ.ಎಲ್ ಕಾರ್ಡ್‌ಗಳ ಸಂಖ್ಯೆ ಎಷ್ಟು; (ವಿವರ ನೀಡುವುದು)

(ಇ) ಇನ್ನೂ ವಿತರಣೆಗೆ ಬಾಕಿ ಇರುವ ಅರ್ಜಿಗಳ ಸಂಖ್ಯೆ ಎಷ್ಟು; (ವಿವರ ನೀಡುವುದು)

(ಈ) ಬಿ.ಪಿ.ಎಲ್ ಕಾರ್ಡ್‌ಗಳ ಕುಟುಂಬದವರಿಗೆ ಸರಿಯಾದ ಸಮಯದಲ್ಲಿ ಆಹಾರ ಧಾನ್ಯಗಳನ್ನು ವಿತರಿಸಲಾಗುತ್ತಿಯೇ?